# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಎಸ್‌ಜಿಎಸ್‌ವೈ ವಿಶೇಷ ಯೋಜನೆಯಡಿ ಜೆಎಸ್‌ಎಸ್ ಮಹಾ ವಿದ್ಯಾಪೀಠ ಸಂಸ್ಥೆ, ಮೈಸೂರಿಗೆ ಮಂಜೂರಾದ ಕೃಷಿ ಉದ್ಯಮ ಹಾಗೂ ಮಾರುಕಟ್ಟೆ ವ್ಯವಸ್ಥೆ ಮೂಲಕ ಬಡತನ ರೇಖೆಗಿಂತ ಕಡಿಮೆ ಇರುವ ಸ್ವಸಹಾಯ ಗುಂಪುಗಳ ಆದಾಯವೃದ್ಧಿ ಯೋಜನೆಗೆ ರಾಜ್ಯದ ಪಾಲಿನ ಎರಡನೇ ಕಂತಿನ ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

1. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ:-J-17022/1/2009/SGSY-II ದಿನಾಂಕ : 19-02-2010.
2. ಕಾರ್ಯನಿರ್ವಾಹಕ ಕಾರ್ಯದರ್ಶಿ, ಜೆಎಸ್‌ಎಸ್ ಮಹಾವಿದ್ಯಾಪೀಠ, ಮೈಸೂರು ರವರ ಪತ್ರ ಸಂಖ್ಯೆ : ಜೆಎಸ್‌ಎಸ್/ಎಸ್‌ಜಿವೈ/ಸಅಬಿ/2010-11 ದಿನಾಂಕ 27-05-2010.
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 01 ಎಸ್‌ಜಿವೈ (SPL) 2009 ದಿನಾಂಕ : 30-03-2011 ಮತ್ತು 15-06-2011.
4. ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯ, ಸರ್ಕಾರದ ಪತ್ರ ಸಂಖ್ಯೆ:-J-17022/1/2009/ SGSY-II (SPL) ದಿನಾಂಕ : 29-10-2013
5. ಕಾರ್ಯನಿರ್ವಾಹಕ ಕಾರ್ಯದರ್ಶಿ, ಜೆಎಸ್‌ಎಸ್ ಮಹಾವಿದ್ಯಾಪೀಠ, ಮೈಸೂರು ರವರ ಪತ್ರ ಸಂಖ್ಯೆ : ಜೆಎಸ್‌ಎಸ್/ಎಸ್‌ಜಿವೈ/ಜಿಒಕೆ/04/276/ 2013-14 ದಿನಾಂಕ 12-12-2013.
6. ಆರ್ಥಿಕ ಇಲಾಖೆ ಸಹಮತಿ ಸಂಖ್ಯೆ : ಆಇ 58 ವೆಚ್ಚ-6/2014 ದಿನಾಂಕ 22-03-2014
7. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 01 ಎಸ್‌ಜಿವೈ (SPL) 2009 ಬೆಂಗಳೂರು ದಿನಾಂಕ : 24-03-2014
8. ಜಿಲ್ಲಾ ಪಂಚಾಯತಿ ಮೈಸೂರು ಇವರ ಪತ್ರ ಸಂ.ಜಿಪಂಮೈ/ಲೆಪಶಾ/ಎಸಿಟಿ-3/ಎಸ್.ಜಿ.ಎಸ್.ವೈ/ವಿ.ಯೋ/2014-15 ದಿನಾಂಕ.04.04.2014
9. ಜೆಎಸ್‌ಎಸ್ ಮಹಾವಿದ್ಯಾಪೀಠ ಮೈಸೂರು ಇವರ ಪತ್ರ ಸಂಖ್ಯೆ ಜೆಎಸ್‌ಎಸ್/ಎಸ್‌ಜಿವೈ/ಜಿಒಐ/02/2014-15 ದಿನಾಂಕ 05-05-2014
10. ಈ ಕಛೇರಿಯ ಇದೇ ಸಮ ಸಂಖ್ಯೆಯ ಪತ್ರದ ದಿನಾಂಕ:24.05.2014
11. ಆರ್ಥಿಕ ಇಲಾಖೆ ಸಹಮತಿ ಸಂಖ್ಯೆ : ಆಇ 58 ವೆಚ್ಚ-6/2014 ದಿನಾಂಕ 19-09-2014

**ಪ್ರಸ್ತಾವನೆ:**

ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯವು ಸ್ವರ್ಣ ಜಯಂತಿ ಗ್ರಾಮ ಸ್ವರೋಜ್‌ಗಾರ್ ಯೋಜನೆಯ ವಿಶೇಷ ಯೋಜನೆಯಡಿ ಮೈಸೂರು ಜಿಲ್ಲೆಯ ಜೆಎಸ್‌ಎಸ್ ಸಂಸ್ಥೆಯು ಸಲ್ಲಿಸಿದ ಕೃಷಿ ಉದ್ಯಮ ಹಾಗೂ ಮಾರುಕಟ್ಟೆ ವ್ಯವಸ್ಥೆ ಮೂಲಕ ಬಡತನ ರೇಖೆಗಿಂತ ಕಡಿಮೆ ಇರುವ ಸ್ವಸಹಾಯ ಗುಂಪುಗಳ ಆದಾಯಭಿವೃದ್ಧಿ ವಿಶೇಷ ಯೋಜನೆಯ ಪ್ರಸ್ತಾವನೆಗೆ ಮಂಜೂರಾತಿ ನೀಡಿರುತ್ತದೆ. ಸದರಿ ಯೋಜನೆಗೆ ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯವು ಒಟ್ಟು ರೂ.8,94,69,000 ಗಳಿಗೆ ಆರ್ಥಿಕ ಮಂಜೂರಾತಿ ನೀಡಿ, ಓದಲಾಗಿದೆ (1) ರನ್ವಯ ಮೈಸೂರು ಜಿಲ್ಲಾ ಪಂಚಾಯತಿಗೆ ಮೊದಲನೇ ಕಂತಿನ ಅನುದಾನವಾಗಿ ರೂ.1,17,43,000 (ಒಂದು ಕೋಟಿ ಹದಿನೇಳು ಲಕ್ಷದ ನಲವತ್ತಮೂರು ಸಾವಿರ ಮಾತ್ರ) ಗಳನ್ನು ಬಿಡುಗಡೆ ಮಾಡಿದೆ. ಇದಕ್ಕನುಗುಣವಾಗಿ ರಾಜ್ಯ ಸರ್ಕಾರವು ಓದಲಾಗಿದೆ (3) ರ ಆದೇಶಗಳಲ್ಲಿ ರಾಜ್ಯದ ಪಾಲಿನ ಒಂದನೇ ಕಂತಿನ ಅನುದಾನ ಒಟ್ಟು ರೂ.39,14,000 ಗಳನ್ನು ಬಿಡುಗಡೆ ಮಾಡಿದೆ.

ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯವು ಎಸ್‌ಜಿಎಸ್‌ವೈ ಯೋಜನೆಯನ್ನು ಪುನರ್‌ರಚಿಸಿ **ಆಜೀವಿಕ** –ನ್ಯಾಷನಲ್ ರೂರಲ್ ಲೈವ್ಲಿ ಹುಡ್ ಮಿಷನ್ (ಎನ್‌ಆರ್‌ಎಲ್‌ಎಂ) 2010-11ರಿಂದ ಜಾರಿಗೊಳಿಸಿದೆ. ಇದರನ್ವಯ ರಾಜ್ಯ ಸರ್ಕಾರವು ರಾಜ್ಯದಲ್ಲಿ ಆಜೀವಿಕ ಯೋಜನೆಯನ್ನು "ಸಂಜೀವಿನಿ" ಹೆಸರಿನಲ್ಲಿ ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ (ಕೆಎಸ್‌ಆರ್‌ಎಲ್‌ಪಿಎಸ್) ಮೂಲಕ ಹಂತ ಹಂತವಾಗಿ ರಾಜ್ಯದಲ್ಲಿ ಜಾರಿಗೊಳಿಸಲಾಗುತ್ತಿದೆ.

ರಾಷ್ಟ್ರಮಟ್ಟದಲ್ಲಿ ಎಸ್‌ಜಿಎಸ್‌ವೈಯಡಿ ಒದಗಿಸಲಾಗಿರುವ ಅನುದಾನದಲ್ಲಿ ಶೇ.15ರಷ್ಟು ಅನುದಾನವನ್ನು ವಿಶೇಷಯೋಜನೆ/ಕಾರ್ಯಕ್ರಮಗಳ ಜಾರಿಗಾಗಿ ಮೀಸಲಿಡಲಾಗುತಿತ್ತು. ಆದರೆ ಪುನರ್‌ರಚಿತ ಎನ್‌ಆರ್‌ಎಲ್‌ಎಂ ಯೋಜನೆಯಡಿ ರಾಷ್ಟ್ರಮಟ್ಟದಲ್ಲಿ ಒದಗಿಸಲಾಗಿರುವ ಅನುದಾನದಲ್ಲಿ ಶೇ.25ರಷ್ಟು ಅನುದಾನವನ್ನು ವಿಶೇಷ ಯೋಜನೆ/ಕಾರ್ಯಕ್ರಮಗಳ ಜಾರಿಗಾಗಿ ಮೀಸಲಿಡಲಾಗಿದೆ. ಈ ವಿಶೇಷ ಯೋಜನೆಗಳನ್ನು ಸರ್ಕಾರದ ಇಲಾಖೆಗಳು, ಅರೆ ಸರ್ಕಾರದ ಇಲಾಖೆಗಳು ಸರ್ಕಾರೇತರ

ಸಂಸ್ಥೆಗಳು ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಜಾರಿಗೊಳಿಸ ಲಾಗುತ್ತದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು 75 : 25 ರ ಅನುಪಾತದಲ್ಲಿ ಅನುದಾನವನ್ನು ಭರಿಸುವುದು. ಇದು ಸಂಜೀವಿನಿ ಯೋಜನೆಯ ಒಂದು ಉಪ ಯೋಜನೆಯಾಗಿದೆ.

ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯವು ಓದಲಾಗಿದೆ (4) ರ ಪತ್ರದಲ್ಲಿ ಜೆಎಸ್ಎಸ್ ಸಂಸ್ಥೆಗೆ ಎರಡನೇ ಕಂತಿನ ಅನುದಾನವಾಗಿ ರೂ.2,34,86,500/- ಗಳನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ಮೈಸೂರು ಮೂಲಕ ಬಿಡುಗಡೆ ಮಾಡಿದೆ. ಇದಕ್ಕನುಗುಣವಾಗಿ ರಾಜ್ಯ ಸರ್ಕಾರವು ಓದಲಾಗಿದೆ(7)ರ ಸರ್ಕಾರಿ ಆದೇಶದಲ್ಲಿ ಮೈಸೂರು ಜಿಲ್ಲಾ ಪಂಚಾಯತಿಗೆ ಎರಡನೇ ಕಂತಿನ ಅನುದಾನ ರೂ.78,28,800/-ಗಳನ್ನು (ರೂ.ಎಪ್ಪತ್ತೆಂಟು ಲಕ್ಷದ ಇಪ್ಪತ್ತೆಂಟು ಸಾವಿರದ ಎಂಟು ನೂರು ಮಾತ್ರ) ಬಿಡುಗಡೆ ಮಾಡಲಾಗಿತ್ತು. ಓದಲಾಗಿದೆ (8) ರ ಪತ್ರದಲ್ಲಿ ಜಿಲ್ಲಾ ಪಂಚಾಯತ್ ಮೈಸೂರು ಇವರು ಅನುದಾನ ಸೆಳೆಯಲು ಖಜಾನೆಗೆ ಸಲ್ಲಿಸಿದ್ದ ಬಿಲ್ಲು "ಸಾಕಷ್ಟಿರದ ಶಿಲ್ಕು" ಎಂಬ ಆಕ್ಷೇಪಣೆಯೊಂದಿಗೆ ಹಿಂತಿರುಗಿರುವುದರಿಂದ ಅನುದಾನ ಸೆಳೆಯಲಾಗಿಲ್ಲವೆಂದು ತಿಳಿಸಿರುತ್ತಾರೆ. ಓದಲಾಗಿದೆ (9)ರ ಪತ್ರದಲ್ಲಿ ಜೆಎಸ್ಎಸ್ ಮಹಾಪೀಠ ಇವರು ಯೋಜನಾ ಅವಧಿ ವಿಸ್ತರಿಸಲು ಕೋರಿರುತ್ತಾರೆ. ಓದಲಾಗಿದೆ (10)ರಲ್ಲಿ ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯಕ್ಕೆ ಪತ್ರ ಬರೆದು ಅವಧಿ ವಿಸ್ತರಿಸಲು ಕೋರಲಾಗಿದೆ. ಸದರಿ ಪ್ರಸ್ತಾವನೆಯು ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯದಲ್ಲಿ ಪರಿಶೀಲನೆಯ ಹಂತದಲ್ಲಿದೆ. ಓದಲಾಗಿದೆ (11)ರಲ್ಲಿ ಆರ್ಥಿಕ ಇಲಾಖೆಯು ಸದರಿ ಯೋಜನೆಗೆ 2014-15ನೇ ಸಾಲಿನ ಅನುದಾನದಲ್ಲಿ ರೂ.78,28,800/-ಗಳನ್ನು ಬಿಡುಗಡೆ ಮಾಡಿರುತ್ತಾರೆ. ಆದುದರಿಂದ 2013-14ನೇ ಸಾಲಿನ ಅನುದಾನದಲ್ಲಿ ಬಿಡುಗಡೆಯಾದ ಅನುದಾನ ವ್ಯಪಗತವಾದ ಕಾರಣ ರಾಜ್ಯದ ಪಾಲಿನ 2ನೇ ಕಂತಿನ ಅನುದಾನ ಬಿಡುಗಡೆಗೊಳಿಸಬೇಕಾಗಿದೆ ಆದುದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 01 ಎಸ್‌ಜಿವೈ (ವಿಯೋ) 2009, ಬೆಂಗಳೂರು**
**ದಿನಾಂಕ : 09-10-2014**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, "ಕೌಶಲ್ಯಾಭಿವೃದ್ಧಿ ತರಬೇತಿ ಹಾಗೂ ಉದ್ಯೋಗಾವಕಾಶ ಕಲ್ಪಿಸುವ ವಿಶೇಷ ಯೋಜನೆ" ಯಡಿ 2014-15 ನೇ ಸಾಲಿಗೆ ರಾಜ್ಯದ ಆಯವ್ಯಯದಲ್ಲಿ ರಾಷ್ಟ್ರೀಯ ಗ್ರಾಮೀಣ ಜೀನೋಪಾಯ ಕಾರ್ಯಾಚರಣೆಗೆ ಒದಗಿಸಿರುವ ಅನುದಾನದಿಂದ ರಾಜ್ಯದ ಪಾಲಿನ ಎರಡನೇ ಕಂತಿನ ಅನುದಾನ ಒಟ್ಟು ರೂ.78,28,800/-ಗಳನ್ನು (ರೂ.ಎಪ್ಪತ್ತೆಂಟು ಲಕ್ಷದ ಇಪ್ಪತ್ತೆಂಟು ಸಾವಿರದ ಎಂಟು ನೂರು ಮಾತ್ರ) ಜೆಎಸ್ಎಸ್ ಸಂಸ್ಥೆಯ ಸಲ್ಲಿಸಿದ ವಿಶೇಷ ಯೋಜನೆಯಾದ "ಕೃಷಿ ಉದ್ಯಮ ಹಾಗೂ ಮಾರುಕಟ್ಟೆ ವ್ಯವಸ್ಥೆ ಮೂಲಕ ಬಡತನ ರೇಖೆಗಿಂತ ಕಡಿಮೆ ಇರುವ ಸ್ವಸಹಾಯ ಗುಂಪುಗಳ ಆದಾಯಾಭಿವೃದ್ಧಿ" ಯೋಜನೆಯನ್ನು ಅನುಷ್ಠಾನಗೊಳಿಸುವ ಸಲುವಾಗಿ ಮೈಸೂರು ಜಿಲ್ಲಾ ಪಂಚಾಯತಿಗೆ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಮಂಜೂರಾತಿ ನೀಡಿ ಬಿಡುಗಡೆ ಮಾಡಿದೆ.

| ಕ್ರ. ಸಂ | ಜಿಲ್ಲಾ ಪಂಚಾಯತಿಯ ಹೆಸರು | ಡ್ರಾಯಿಂಗ್ ಕೋಡ್ | ಜಿಲ್ಲಾ ಪರಿಷದ್ ಕೋಡ್ | ಕೇಂದ್ರ ಸರ್ಕಾರವು ಬಿಡುಗಡೆ ಮಾಡಿರುವ ಎರಡನೇ ಕಂತಿನ ಅನುದಾನ | ರಾಜ್ಯ ಸರ್ಕಾರವು ಬಿಡುಗಡೆ ಮಾಡುತ್ತಿರುವ ಎರಡನೇ ಕಂತಿನ ಅನುದಾನ |
|---|---|---|---|---|---|
| 1. | ಮೈಸೂರು | 0900ZZ0001 | 300 | ರೂ.2,34,86,500/- | ರೂ.78,28,800/- |

**ಷರತ್ತುಗಳು:**

- ವಿಶೇಷ ಯೋಜನೆ ಮಂಜೂರಾದ ಸಮಯದಲ್ಲಿ ನೀಡಿರುವ ಮಾರ್ಗಸೂಚಿಯಂತೆ ಅನುದಾನವನ್ನು ಉಪಯೋಗಿಸುವುದು.
- ಅನುಷ್ಠಾನ ಸಂಸ್ಥೆಗೆ ಸರ್ಕಾರದ ಆದೇಶದ ದಿನಾಂಕದಿಂದ 15 ದಿನದೊಳಗೆ ಅನುದಾನ ಬಿಡುಗಡೆ ಮಾಡುವುದು.
- ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯವು ಸದರಿ ವಿಶೇಷ ಯೋಜನೆಗೆ ಮಂಜೂರಾತಿ ನೀಡುವಾಗ ನಿಬಂಧಿಸಿದ ಷರತ್ತುಗಳನ್ನು ತಪ್ಪದೇ ಪಾಲಿಸುವುದು.
- ಮೇಲ್ಕಂಡ ರಾಜ್ಯದ ಪಾಲಿನ ಅನುದಾನವನ್ನು ಪ್ರಧಾನ ಲೆಕ್ಕಶೀರ್ಷಿಕೆ 2501 ಗ್ರಾಮೀಣಾಭಿವೃದ್ಧಿಗಾಗಿ ವಿಶೇಷ ಕಾರ್ಯಕ್ರಮಗಳು 01 ಸಮಗ್ರ ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳು-198 ಗ್ರಾಮ ಪಂಚಾಯತಿಗಳಿಗೆ ಸಹಾಯ-6 ಗ್ರಾಮ ಪಂಚಾಯತಿಗಳು-01-ಬ್ಲಾಕ್ ಅನುದಾನ ಕೇಂದ್ರ ಪುರಸ್ಕೃತ ಯೋಜನೆ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (ಎನ್ಆರ್ಎಲ್ಎಂ) 2014-15ನೇ ಸಾಲಿನ ಹೊಸ ಕೋಡ್ 2501-00-101-0-05 (2501-01-198-6-01) ರಡಿ ಭರಿಸುವುದು.
- ಜಿಲ್ಲಾ ಪಂಚಾಯತಿಗಳಿಗೆ ಬಿಡುಗಡೆ ಮಾಡಿದ ಅನುದಾನವನ್ನು ಮುಖ್ಯಲೆಕ್ಕಾಧಿಕಾರಿಗಳು ಸ್ವೀಕರ್ತನ ರಸೀತಿ (ಪೇಯಿಸ್ ರಸೀದಿ)ಯ ಮೂಲಕ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳ ಮೇಲುರುಜುವಿನೊಂದಿಗೆ ಜಿಲ್ಲಾ ಪಂಚಾಯತಿ ನಿಧಿಯಿಂದ ಅನುದಾನವನ್ನು ಖಜಾನೆಯಿಂದ ಪಡೆದುಕೊಂಡು ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಪ್ರತ್ಯೇಕವಾಗಿ ತೆರೆದಿರುವ ಬ್ಯಾಂಕ್‌ಖಾತೆಗೆ ಜಮೆ ಮಾಡಿಕೊಂಡು ವೆಚ್ಚವನ್ನು ಭರಿಸತಕ್ಕದ್ದು.

- ಈ ಯೋಜನೆಯಡಿ ಬಿಡುಗಡೆ ಮಾಡಿದ ಅನುದಾನವನ್ನು ಸದರಿ ಯೋಜನೆಯ ಅನುಷ್ಠಾನಕ್ಕಾಗಿ ಮಾತ್ರ ಉಪಯೋಗಿಸತಕ್ಕದ್ದು.
- ಕೆ.ಎಸ್.ಆರ್.ಎಲ್.ಪಿ.ಎಸ್. ಬೆಂಗಳೂರು ಇವರು ಅಗ್ಗಿಂದಾಗ್ಗೆ ನೀಡುವ ಸೂಚನೆಯ ಮೇರೆಗೆ ಅನುದಾನವನ್ನು ವೆಚ್ಚ ಮಾಡತಕ್ಕದ್ದು.
- ಮೈಸೂರು ಜಿಲ್ಲಾ ಪಂಚಾಯತಿಯ ಮುಖ್ಯ ಲೆಕ್ಕಾಧಿಕಾರಿಗಳಿಗೆ ಅನುದಾನ ಸೆಳೆಯಲು ಕಾನೂನು ರೀತ್ಯಾ ಅಧಿಕಾರ ನೀಡಲಾಗಿದೆ.
- ಬಿಡುಗಡೆ ಮಾಡುವ ಅನುದಾನಕ್ಕೆ ಸಂಬಂಧಪಟ್ಟಂತೆ ಸಂಸ್ಥೆಯ ಆಂತರಿಕ ಲೆಕ್ಕ ಪರಿಶೋಧನೆಯನ್ನು ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತಿ, ಮೈಸೂರು ರವರು ಮಾಡುವುದು.
- ಆರ್ಥಿಕ ಮತ್ತು ಭೌತಿಕ ಸಾಧನೆಯ ಆಯಾ ಮಾಹೆಯ ಪ್ರಗತಿ ವರದಿಯನ್ನು ಅನುಷ್ಠಾನ ಸಂಸ್ಥೆಯಿಂದ ಪಡೆದು ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯ, ನವದೆಹಲಿ ಮತ್ತು ಅಭಿಯಾನ ನಿರ್ದೇಶಕರು, ಸಂಜೀವಿನಿ, ಕೆಎಸ್ಆರ್ಎಲ್ಪಿಎಸ್, ಬೆಂಗಳೂರು ಇವರಿಗೆ ಸಲ್ಲಿಸುವುದು.
- ಈ ಆದೇಶವನ್ನು ಆರ್ಥಿಕ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ಇವರ ಸಹಮತಿ ಸಂಖ್ಯೆ : ಆಇ 58 ವೆಚ್ಚ-6/2014 ದಿನಾಂಕ 19-09-2014 ರಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ

(ಶ್ರೀಕೃಷ್ಣ ಎನ್.ಬುಗ್ಗ್ಯಾಗೋಳ)
ನಿರ್ದೇಶಕರು (ಇ-ಆಡಳಿತ) ಮತ್ತು (ಸ್ವಉಕಾ) ಹಾಗೂ
ಪ.ನಿ. ಸರ್ಕಾರದ ಉಪ ಕಾರ್ಯದರ್ಶಿಗಳು,(ಪ್ರಭಾರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ: ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಇವರಿಗೆ ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಲು ಕೋರಲಾಗಿದೆ. (ಎರಡು ಪ್ರತಿಗಳು)

<u>ಪ್ರತಿಯನ್ನು:</u>

1) ಪ್ರಧಾನ ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಭಾರತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಎಸ್‌ಜಿಎಸ್‌ವೈ II (ಎಸ್‌ಪಿ), ಗ್ರಾಮೀಣಾಭಿವೃದ್ಧಿ ಮಂತ್ರಾಲಯ, (ಆರ್-ಎಸ್‌ಪಿ) ಇಂಡಿಯಾ ಹೆಬಿಟೇಟ್ ಸೆಂಟರ್, 2ನೇ ಮಹಡಿ, ಕೋರ್-5-ಬಿ, ಲೋದಿ ರೋಡ್, ನವದೆಹಲಿ
3) ಭಾರತ ಸರ್ಕಾರದ ಉಪ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮಂತ್ರಾಲಯ, 6 ನೇ ಮಹಡಿ, ಹೋಟೆಲ್ ಸಾಮ್ರಾಟ್, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ-110021.
4) ಅಧ್ಯಕ್ಷರು, ಮೈಸೂರು ಜಿಲ್ಲಾ ಪಂಚಾಯತ್, ಮೈಸೂರು.
5) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಮೈಸೂರು.
6) ಮುಖ್ಯ ಲೆಕ್ಕಾಧಿಕಾರಿಗಳು / ಯೋಜನಾ ನಿರ್ದೇಶಕರು (ಡಿಆರ್‌ಡಿಎ), ಜಿಲ್ಲಾ ಪಂಚಾಯತ್, ಮೈಸೂರು.
7) ಜಿಲ್ಲಾ ಖಜಾನಾಧಿಕಾರಿಗಳು, ಮೈಸೂರು ಜಿಲ್ಲೆ ಮೈಸೂರು. ಇವರಿಗೆ ಸದರಿ ಬಿಲ್ಲನ್ನು ಮಾನ್ಯ ಮಾಡಲು ಕೋರಿದೆ.
8) ಕಾರ್ಯನಿರ್ವಾಹಕ ಕಾರ್ಯದರ್ಶಿಗಳು, ಜೆಎಸ್‌ಎಸ್ ಮಹಾವಿದ್ಯಾಪೀಠ, ಜಗದ್ಗುರು ಡಾ: ಶ್ರೀ ಶಿವರಾತ್ರಿ ರಾಜೇಂದ್ರ ವೃತ್ತ, ಮೈಸೂರು – 570 007.
9) ಪ್ರಾದೇಶಿಕ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ಮೈಸೂರು ವಿಭಾಗ, ಮೈಸೂರು.
10) ಅಭಿಯಾನ ನಿರ್ದೇಶಕರು, ಸಂಜೀವಿನಿ-ಕೆಎಸ್ಆರ್ಎಲ್ಪಿಎಸ್,ಕೆ.ಎಸ್.ಡಿ.ಬಿ,ನಂ-55,ಅಭಯಸಂಕೀರ್ಣ,ರಿಸಲ್ದಾರ್ ಬೀದಿ, ಶೇಷಾದ್ರಿ ಪುರಂ, ಬೆಂಗಳೂರು ಇವರ ಆಪ್ತ ಸಹಾಯಕರಿಗೆ
11) ಅಪರ ಅಭಿಯಾನ ನಿರ್ದೇಶಕರು, ಸಂಜೀವಿನಿ-ಕೆಎಸ್ಆರ್ಎಲ್ಪಿಎಸ್, ಕೆ.ಎಸ್.ಡಿ.ಬಿ,ನಂ-55,ಅಭಯಸಂಕೀರ್ಣ,ರಿಸಲ್ದಾರ್ ಬೀದಿ, ಶೇಷಾದ್ರಿ ಪುರಂ, ಬೆಂಗಳೂರು ಇವರ ಆಪ್ತ ಸಹಾಯಕರಿಗೆ
12) ಉಪ ನಿರ್ದೇಶಕರು, ಖಜಾನೆ ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ.49, 2ನೇ ಮಹಡಿ, ಖನಿಜ ಭವನ (ಸರ್ಕಾರಿ ಬ್ಲಾಕ್) ರೇಸ್ ಕೋರ್ಸ್ ರಸ್ತೆ ಬೆಂಗಳೂರು.

13) ಉಪ ನಿರ್ದೇಶಕರು (ಸ್ವಉಕಾ), ಗ್ರಾಅಪಂರಾ ಇಲಾಖೆ.

14) ರಾಜ್ಯ ಕಾರ್ಯಕ್ರಮ ವ್ಯವಸ್ಥಾಪಕರು(ಹಣಕಾಸು), ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್, ಕೆ.ಎಸ್.ಡಿ.ಬಿ,ನಂ-55,ಅಭಯಸಂಕೀರ್ಣ,ರಿಸಲ್ದಾರ್ ಬೀದಿ, ಶೇಷಾದ್ರಿ ಪುರಂ, ಬೆಂಗಳೂರು.

28/10/14

**ಪ್ರತಿ ಮಾಹಿತಿಗಾಗಿ :-**

15) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು

16) ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಗಳಿಗೆ.

17) ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು/ಸರ್ಕಾರದ ಕಾರ್ಯದರ್ಶಿಗಳು, (ಪಂ.ರಾಜ್), ಗ್ರಾಅಪಂರಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳಿಗೆ.

18) ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಅಪಂರಾ ಇಲಾಖೆ ಇವರ ಆಪ್ತ ಸಹಾಯಕರಿಗೆ.

19) ನಿರ್ದೇಶಕರು (ಇ-ಆಡಳಿತ) ಮತ್ತು (ಸ್ವಉಕಾ) ಹಾಗೂ ಪ.ನಿ. ಸರ್ಕಾರದ ಉಪ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರು

20) ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಅಪಂರಾ ಇಲಾಖೆ, ಬೆಂಗಳೂರು.

21) ಶಾಖಾಧಿಕಾರಿ, ಪತ್ರ ಸ್ವೀಕಾರ ಮತ್ತು ರವಾನೆ ಶಾಖೆ, ಗ್ರಾಅಪಂರಾ ಇಲಾಖೆ.

22) ಗಣಕ ಕೋಶ, ಗ್ರಾಅಪಂರಾ ಇಲಾಖೆ, ಮುಂದಿನ ಕ್ರಮಕ್ಕಾಗಿ

***

**ರವಾನಿಸಲಾಗಿದೆ**

ಸಂ. 230 ದಿನಾಂಕ 23/10/2014

ಸ್ವೀಕೃತಿ / ರವಾನೆ / ಸಹಾಯಕರು